**Akashvani : Bangalore**
**Regional Bulletin In Kannada**
**13.09.2025 / 6.40pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**<><*<><>*><>**

ಮುಖ್ಯಾಂಶಗಳು

೧. ಶಾಸನ ಸಭೆಗಳು ಅಶಿಸ್ತಿನ ಅಖಾಡವಲ್ಲ, ಚಿಂತನೆ ನಡೆಸುವ ವೇದಿಕೆಯಾಗಲಿ - ಲೋಕಸಭಾಧ್ಯಕ್ಷ ಓಂ ಬಿರ್ಲಾ

೨. ಶಿಕ್ಷಣದಿಂದ ಸ್ವಾಭಿಮಾನಿ, ಜವಾಬ್ದಾರಿಯುತ ವ್ಯಕ್ತಿಯಾಗಲು ಸಾಧ್ಯ - ಮುಖ್ಯಮಂತ್ರಿ ಅಭಿಮತ

೩. ಒಳಮೀಸಲಾತಿ ಅಲೆಮಾರಿ ಸಮುದಾಯಕ್ಕೆ ಅನ್ಯಾಯವಾಗಲು ಬಿಡುವುದಿಲ್ಲ - ಸಚಿವ ಕೆ.ಎಚ್.ಮುನಿಯಪ್ಪ

೪. ವಿಶ್ವವಿಖ್ಯಾತ ಗಗನಚುಕ್ಕಿ ಜಲಪಾತೋತ್ಸವಕ್ಕೆ ಇಂದು ಚಾಲನೆ ನೀಡಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

*><><><*><><><*

ಶಾಸನಸಭೆಗಳು ಸಾರ್ವಜನಿಕ ಹಿತದ ಗುರಿಯಾಗಿ ಮುಖ್ಯ ವಿಷಯಗಳ ಕುರಿತು ಚರ್ಚೆ, ವಾದ ಮತ್ತು ಚಿಂತನೆ ನಡೆಸುವ ವೇದಿಕೆಗಳಾಗಿ ಉಳಿಯಲಿ. ಗೊಂದಲ ಮತ್ತು ಅಶಿಸ್ತಿನ ಅಖಾಡವಲ್ಲ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು. ಅವರು ಇಂದು ಬೆಂಗಳೂರಿನಲ್ಲಿ ನಡೆದ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಭಾರತ ಪ್ರಾದೇಶಿಕ ಸಮ್ಮೇಳನದ ಸಮಾಪನ ಸಮಾರಂಭದಲ್ಲಿ ಮಾತನಾಡಿ, ಶಾಸನ ಸಭೆಗಳು ಸಾಮಾಜಿಕ ಹಾಗೂ ರಾಷ್ಟ್ರೀಯ ಹಿತಕ್ಕಾಗಿ ಮಾಹಿತಿ ಆಧಾರಿತ ಹಾಗೂ ಫಲಕಾರಿ ನಿರ್ಣಯಗಳನ್ನು ತೆಗೆದುಕೊಳ್ಳುವ ಸ್ಥಳಗಳಾಗಬೇಕು ಎಂದು ತಿಳಿಸಿದರು. ಉತ್ತಮ ಸಂಸದೀಯ ಅಭ್ಯಾಸಗಳು ಮತ್ತು ಪ್ರಕ್ರಿಯೆಗಳ ಕುರಿತು ಸಮ್ಮೇಳನದಲ್ಲಿ ಚರ್ಚೆಯಾಗಿದೆ. ಈ ಗುರಿ ಸಾಧಿಸಲು ರಾಜಕೀಯ ಪಕ್ಷಗಳು ಹಾಗೂ ಶಾಸಕರನ್ನು ನಂಬಿಕೆಗೆ ತೆಗೆದುಕೊಳ್ಳಬೇಕು. ಶಾಸಕರು ಜವಾಬ್ದಾರಿಯುತವಾಗಬೇಕು, ಪಾರದರ್ಶಕತೆ ಹೆಚ್ಚಳವಾಗಬೇಕು ಮತ್ತು ಶಾಸನಸಭೆಯಲ್ಲಿ ನಡೆಯುವ ವ್ಯವಹಾರಗಳು ಹಾಗೂ ನಿರ್ಧಾರಗಳ ಮಾಹಿತಿ ಜನತೆಗೆ ತಲುಪಬೇಕು ಎಂದು ಅವರು ಹೇಳಿದರು. ಸಂಸತ್ತಿನಲ್ಲಿ ಗ್ರಂಥಾಲಯ, ಸಂಶೋಧನಾ ಮತ್ತು ಆಕರ ಘಟಕಗಳನ್ನು ಸುಧಾರಿಸುವುದರಿಂದ ಅವರ ಚರ್ಚೆಗಳ ಮಟ್ಟವನ್ನು

ಇನ್ನಷ್ಟು ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದರು. ಜನತೆಯಲ್ಲಿ ವಿಶ್ವಾಸ ಮೂಡಿಸಿ, ಸಂಸದೀಯ ಪ್ರಜಾಪ್ರಭುತ್ವವನ್ನು ಬಲಪಡಿಸಬೇಕಾದ ಅಗತ್ಯವಿದೆ. ರಾಜಕೀಯ ಭೇದಭಾವಗಳನ್ನು ಮೀರಿ, ಸಾಮಾಜಿಕ ಹಿತಕ್ಕಾಗಿ ನೀತಿ ನಿರ್ಮಾಣ ಪ್ರಕ್ರಿಯೆಯಲ್ಲಿ ಶಾಸಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು. ಮಾಧ್ಯಮಗಳು ಶಾಸಕರ ಸಕಾರಾತ್ಮಕ ಕಾರ್ಯಚಟುವಟಿಕೆಗಳ ಮಾಹಿತಿಯನ್ನು ಜನರಿಗೆ ತಲುಪಿಸಲು ಸಹಕರಿಸಬೇಕೆಂದು ಮನವಿ ಮಾಡಿದ ಅವರು, ೨೦೪೭ರೊಳಗೆ “ವಿಕಸಿತ ಭಾರತ”ದ ಕನಸು ನನಸಾಗಿಸಲು ಶಾಸನ ಸಭೆಗಳು ಈ ದಿಕ್ಕಿನಲ್ಲಿ ಕೆಲಸ ಮಾಡಲಿ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು.

ಸಮಾರೋಪ ಸಮಾರಂಭದ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಲೋಕಸಭಾಧ್ಯಕ್ಷ ಓಂಬಿರ್ಲಾ, ಪ್ರಜಾಪ್ರಭುತ್ವದ ಕುರಿತು ಜನರಲ್ಲಿ ವಿಶ್ವಾಸ ಹೆಚ್ಚಾಗಲು ಸದನಗಳಲ್ಲಿ ಯಾವುದೇ ಅಡೆತಡೆಯಿಲ್ಲದೇ ಕಲಾಪಗಳು ನಡೆದು ಜನಕಲ್ಯಾಣ ಕೇಂದ್ರಿತ ಚರ್ಚೆಗಳಿಗೆ ಒತ್ತು ನೀಡುವ ಹಾಗೂ ಒಟ್ಟಾರೆ ವ್ಯವಸ್ಥೆಯಲ್ಲಿ ಪಾರದರ್ಶಕತೆ ಹೆಚ್ಚಿಸುವ ಕುರಿತು ಸಮ್ಮೇಳನದಲ್ಲಿ ಚರ್ಚೆ ನಡೆಸಲಾಗಿದೆ ಎಂದರು.

*><><><*><><><*

ಶಿಕ್ಷಣದಿಂದ ಮಾತ್ರ ನಮ್ಮ ಜ್ಞಾನದ ವಿಕಾಸವಾಗುತ್ತದೆ. ಅದರಿಂದ ನಾವು ಸ್ವತಂತ್ರ, ಸ್ವಾಭಿಮಾನಿ ಹಾಗೂ ಜವಾಬ್ದಾರಿಯುತ ವ್ಯಕ್ತಿಯಾಗಲು ಸಾಧ್ಯ. ಅದಕ್ಕಾಗಿ ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆದುಕೊಳ್ಳಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಅವರು ಇಂದು ಜೆಎಸ್‌ಎಸ್ ಪ್ರಸಾದ ನಿಲಯಗಳ ಹಿರಿಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ ಮೈಸೂರು ಇವರ ವತಿಯಿಂದ ಮೈಸೂರಿನ ವರುಣ ಕೆರೆಯ ಪಕ್ಕದಲ್ಲಿರುವ ಶ್ರೀ ಶಿವರಾತ್ರಿ ರಾಜೇಂದ್ರ ನಗರದಲ್ಲಿ ಆಯೋಜಿಸಲಾಗಿದ್ದ ಶ್ರೀ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪ ಹಾಗೂ ಸಂಘದ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದರು. ಜೆಎಸ್‌ಎಸ್ ಕಾಲೇಜಿನ ಹಳೆಯ ವಿದ್ಯಾರ್ಥಿಗಳು ಸೇರಿ ಗೃಹ ನಿರ್ಮಾಣ ಸಂಘವನ್ನು ಸ್ಥಾಪಿಸಿದ್ದಾರೆ. ಸಂಘದ ಮೂಲಕ ನಿವೇಶನಗಳನ್ನು ಹಂಚಿಕೆ ಮಾಡುವ ಕೆಲಸವನ್ನು ಮಾಡಿದ್ದಾರೆ. ಸಂಘವು ಹಿಂದೆ ಜಮೀನು ಕೊಂಡ ದರದಲ್ಲಿಯೇ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಸಹಕಾರ ಸಂಘಗಳ ಇತಿಹಾಸದಲ್ಲಿಯೇ ಪ್ರಥಮ ಎಂದು ತಿಳಿಸಿದ ಮುಖ್ಯಮಂತ್ರಿ ಸಂಘದ ಸದಸ್ಯರನ್ನು ಅಭಿನಂದಿಸಿದರು. ಬಸವಣ್ಣನವರು ಹೇಳಿದಂತೆ ಜಾತಿ ರಹಿತ, ವರ್ಗ ರಹಿತ ಸಮಾಜ ನಿರ್ಮಾಣ ಆಗಬೇಕು . ಸಂವಿಧಾನದ ಆಶಯವೂ ಅದೇ- ಸಮಾನತೆ, ಸ್ವಾತಂತ್ರ್ಯ, ಭ್ರಾತೃತ್ವ.

ಆದ್ದರಿಂದ  ನಾವೆಲ್ಲರೂ ಸಮ ಸಮಾಜ ನಿರ್ಮಾಣ ಮಾಡಿ ಸಹಬಾಳ್ವೆ ರೂಢಿಸಿಕೊಳ್ಳಬೇಕು ಎಂದು ಅವರು ಹೇಳಿದರು.

*><><><*><><><*

ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ ಹಾಗೂ ಸಾಂಸ್ಕೃತಿಕ ಮಹೋತ್ಸವದೊಂದಿಗೆ ಸಂಸದರ ಕ್ರೀಡಾ ಮಹೋತ್ಸವವನ್ನು ಜನವರಿ ತಿಂಗಳಿನಲ್ಲಿ ಹುಬ್ಬಳ್ಳಿಯಲ್ಲಿ ಆಯೋಜಿಸಲಾಗುವುದು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ  ಸಂಸದರ ಕ್ರೀಡಾ ಮಹೋತ್ಸವ ಪೋಸ್ಟರ್, ಟೀಸರ್ ಹಾಗೂ ಜೆರ್ಸಿ ಬಿಡುಗಡೆ ಮಾಡಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿವರ್ಷದಂತೆ ಕ್ರೀಡಾಕೂಟ ಆಯೋಜನೆ ಮಾಡುತ್ತಿದ್ದು, ಇದೇ ೧೦ ರೊಳಗಾಗಿ ಕ್ರೀಡಾಪಟುಗಳು ನೋಂದಣಿ ಮಾಡಿಕೊಳ್ಳಬಹುದು ಎಂದು ಹೇಳಿದರು. ಕ್ರೀಡಾಪಟುಗಳಿಗಾಗಿ ಕಬ್ಬಡ್ಡಿ, ಹಗ್ಗ ಜಗ್ಗಾಟ,  ಕ್ರಿಕೆಟ್, ವಾಲಿಬಾಲ್,  ಕುಸ್ತಿ, ಲಗೋರಿ, ಗಿಲ್ಲಿದಾಂಡು, ಯೋಗ,  ಮಲ್ಲಗಂಬ, ಅಥ್ಲೆಟಿಕ್ಸ್ ಹೀಗೆ ವಿವಿಧ ಕ್ರೀಡೆಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದರು. ಜನವರಿ ತಿಂಗಳಿನಲ್ಲಿ ಗಾಳಿಪಟ ಉತ್ಸವ ಕಾರ್ಯಕ್ರಮದ ಜೊತೆಯಲ್ಲಿ  ಸಂಸದರ ಕ್ರೀಡಾಕೂಟಾವನ್ನು ನಡೆಸಲಾಗುವುದು. ಇಂಟರ್ನೆಟ್ ಮೂಲಕ ಕ್ರೀಡಾಪಟುಗಳು ನೋಂದಣಿ ಮಾಡಿಕೊಳ್ಳಬಹುದು ಎಂದು ಅವರು ತಿಳಿಸಿದರು.

*><><><*><><><*

೫೬ನೇ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಇದೇ ೨೨ ರಿಂದ ಜಾರಿಗೆ ಬರುವಂತೆ  ಜಿಎಸ್‌ಟಿ ಕಡಿಮೆ ಮಾಡಿರುವ ಹಿನ್ನೆಲೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿರುವ ತೆರಿಗೆ ತಜ್ಞ ವಿಜಯ ರಾಜೇಶ್ ಹೊಸಪೀಳಿಗೆಯ ತೆರಿಗೆ ವ್ಯವಸ್ಥೆ, ಸರ್ಕಾರ ವ್ಯಾಪಾರಸ್ಥರು ಹಾಗೂ ಗ್ರಾಹಕರನ್ನು ಜೊತೆಯಲ್ಲಿ ಕರೆದೊಯ್ಯುತ್ತದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

**ಧ್ವನಿ : ವಿಜಯ ರಾಜೇಶ್, ತೆರಿಗೆ ತಜ್ಞ (  ೨೬ ಸೆಕೆಂಡುಗಳು)**

*><><><*><><><*

ರಾಜ್ಯದ ಅಲೆಮಾರಿ ಸಮುದಾಯಕ್ಕೆ ಒಳ ಮೀಸಲಾತಿ ನೀಡಿಕೆಯಲ್ಲಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಗಂಭೀರ ಚಿಂತನೆ ನಡೆಸಿದೆ ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಖಾತೆ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಮಾದಿಗ ಸಮುದಾಯ ಏರ್ಪಡಿಸಿದ್ದ ಒಳ ಮೀಸಲಾತಿ ವಿಜಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶೋಷಿತರಲ್ಲಿಯೇ ಶೋಷಿತ ಸಮುದಾಯವಾಗಿರುವ ಅಲೆಮಾರಿಗಳಿಗೆ

ನ್ಯಾಯಕೊಡಬೇಕೆಂಬ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಡಾ.ಜಿ.ಪರಮೇಶ್ವರ್, ಎಚ್.ಸಿ.ಮಹಾದೇವಪ್ಪ, ಪ್ರಿಯಾಂಕ್ ಖರ್ಗೆ, ಶಿವರಾಜ್ ತಂಗಡಗಿ ಜೊತೆಗೆ ಗಂಭೀರ ಚರ್ಚೆ ನಡೆಸಲಾಗಿದೆ ಎಂದರು. ನ್ಯಾಮಮೂರ್ತಿ ನಾಗಮೋಹನ್ ದಾಸ್ ವರದಿಯಂತೆ ತೀರಾ ಹಿಂದುಳಿದಿರುವ ಅಲೆಮಾರಿ ಸಮುದಾಯಕ್ಕೆ ಯಾವುದೇ ಕಾರಣಕ್ಕೂ ಅನ್ಯಾಯವಾಗಲು ಬಿಡುವುದಿಲ್ಲ ಎಂದು ತಿಳಿಸಿದರು. ಒಳ ಮೀಸಲಾತಿ ನೀಡಿಕೆ ವಿಚಾರದಲ್ಲಿ ವಿರೋಧ ಪಕ್ಷಗಳು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿವೆ. ಸಾಧ್ಯವಾದರೆ ಸಲಹೆ ಕೊಡಿ ಆದರೆ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡಬಾರದು ಎಂದು ಕೆ.ಎಚ್.ಮುನಿಯಪ್ಪ ಹೇಳಿದರು.

**ಧ್ವನಿ : ಸಚಿವ ಕೆ.ಎಚ್.ಮುನಿಯಪ್ಪ, ( ೨೪ ಸೆಕೆಂಡುಗಳು)**

*><><><*><><><*

ವಿಶ್ವವಿಖ್ಯಾತ ಗಗನಚುಕ್ಕಿ ಜಲಪಾತೋತ್ಸವಕ್ಕೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಶಿವನಸಮುದ್ರದ ಬಳಿ ಇರುವ ಗಗನಚುಕ್ಕಿ ಬಳಿ ಇಂದು ಮತ್ತು ನಾಳೆ ಜಲಪಾತೋತ್ಸವ ನಡೆಯಲಿದ್ದು, ಬೆಳಿಗ್ಗೆ ೧೧ರಿಂದ ರಾತ್ರಿ ೧೧.೩೦ರವರೆಗೆ ಜಾನಪದ ಕಲಾತಂಡಗಳು, ಹಾಸ್ಯ, ಸಿನಿಮಾ ತಾರೆಯರು, ಗಾಯಕರು ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸುಮಾರು ೨ ಲಕ್ಷಕ್ಕೂ ಅಧಿಕ ಜನ ಭಾಗವಹಿಸುವ ನಿರೀಕ್ಷೆ ಇದ್ದು, ಈಗಾಗಲೇ ಸಾಂಸ್ಕೃತಿಕ ಕಾರ್ಯಕ್ರಮ ಆರಂಭವಾಗಿದೆ. ಜಲಪಾತಕ್ಕೆ ಅಳವಡಿಸಿರುವ ಲೇಸರ್ ಲೈಟ್ ಪ್ರಮುಖ ಆಕರ್ಷಣೆಯಾಗಿದ್ದು, ಜಲಪಾತದ ಬಳಿ ಬೃಹತ್ ವೇದಿಕೆ ಸ್ಥಾಪಿಸಲಾಗಿದೆ. ಎರಡು ದಿನಗಳ ಕಾಲ ಊಟ ಮತ್ತು ಮೂಲ ಸೌಕರ್ಯದ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಶಾಸಕ ನರೇಂದ್ರಸ್ವಾಮಿ ತಿಳಿಸಿದ್ದಾರೆ. ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಹೆಚ್.ಕೆ.ಪಾಟೀಲ್, ಎನ್.ಚಲುವರಾಯಸ್ವಾಮಿ, ಶಿವರಾಜ್ ತಂಗಡಗಿ, ಬೈರತಿ ಸುರೇಶ್, ಸತೀಶ್ ಜಾರಕಿಹೊಳಿ, ಜಮೀರ್ ಅಹ್ಮದ್ ಖಾನ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

*><><><*><><><*

ಮುಂದಿನ ವರ್ಷದ ದಸರಾ ಕ್ರೀಡಾಕೂಟದ ವೇಳೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಸುಮಾರು ೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸ್ಪೋರ್ಟ್ಸ್ ಸ್ಕೂಲ್ ನಿರ್ಮಿಸುವುದಾಗಿ ವಿಜಯನಗರ ಶಾಸಕ ಹೆಚ್ಆರ್ ಗವಿಯಪ್ಪ ಹೇಳಿದ್ದಾರೆ. ಅವರು ಇಂದು ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ, ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಂಡ ಮಕ್ಕಳಿಗೆ ಶುಭ ಹಾರೈಸಿ, ಸುದ್ದಿಗಾರರೊಂದಿಗೆ

ಮಾತನಾಡಿದ ಅವರು, ಜಿಲ್ಲಾ ಕ್ರೀಡಾಂಗಣವು ಅನೇಕ ಕ್ರೀಡೆಗಳಿಗೆ ಸುಸರ್ಜಿತವಾಗಿಲ್ಲ. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲ ಶಾಸಕರೊಂದಿಗೆ ಸಮಾಲೋಚಿಸಿ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿಗೂ ೫ ಕೋಟಿ ರೂಪಾಯಿಗಳನ್ನು ಒದಗಿಸುವುದಾಗಿ ಅವರು ಹೇಳಿದರು.

*><><><*><><><*